# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 426

ಸದಸ್ಯರ ಹೆಸರು : ಶ್ರೀ ಲಹರ್ ಸಿಂಗ್ ಸಿರೋಯಾ

ಉತ್ತರಿಸುವ ದಿನಾಂಕ : 12.12.2018

ಉತ್ತರಿಸುವವರು : ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು

*****

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬನ್ನೇರುಘಟ್ಟ ರಾಷ್ಟ್ರೀಯ ಅಭಯಾರಣ್ಯ ಪ್ರದೇಶದಲ್ಲಿ ಅಕ್ರಮ ಗಣಿಗಾರಿಕೆ ತಡೆಗಟ್ಟಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; | ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನವನ ಪ್ರದೇಶದಲ್ಲಿ ಯಾವುದೇ ಅಕ್ರಮ ಗಣಿಗಾರಿಕೆ ನಡೆಯುತ್ತಿರುವುದಿಲ್ಲ. |
| ಆ) | ಬನ್ನೇರುಘಟ್ಟ ಸೂಕ್ಷ್ಮ ಪರಿಸರ ವಲಯ ಕರಡು ಅಧಿಸೂಚನೆ 2016 ಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ಆಕ್ಷೇಪಣೆ ಸಲ್ಲಿಸದಿರಲು ಕಾರಣಗಳೇನು; | ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನವನ ಪರಿಸರ ಸೂಕ್ಷ್ಮ ವಲಯದ ಕರಡು ಅಧಿಸೂಚನೆ 2016 ಕ್ಕೆ ಸಂಬಂಧಿಸಿದಂತೆ, ಆಕ್ಷೇಪಣೆಗಳನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿರುತ್ತದೆ. |
| ಇ) | ಸರ್ಕಾರವು ಸೂಕ್ಷ್ಮ ಪರಿಸರ ವಲಯವನ್ನು 268.96 ಚ.ಕಿ.ಮೀ. ನಿಂದ 168.84 ಚ.ಕಿ.ಮೀ. ಗೆ ಕಡಿಮೆಗೊಳಿಸಲು ಶಿಫಾರಸ್ಸು ಮಾಡಿದೆಯೇ; | ಶಿಫಾರಸ್ಸು ಮಾಡಲಾಗಿದೆ. |
| ಈ) | ಹಾಗಿದ್ದಲ್ಲಿ, ಇದಕ್ಕೆ ಕಾರಣವೇನು; ಇದರಿಂದ ಉದ್ಯಾನದ ಸಸ್ಯ ಹಾಗೂ ಪ್ರಾಣಿ ಸಂಕುಲಕ್ಕೆ ಅಪಾಯಕಾರಿ ಎನ್ನುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ದಿನಾಂಕ: 10.02.2017 ರಂದು ನಡೆದ ಸಂಪುಟ ಉಪ ಸಮಿತಿಯ ಸಭೆಯಲ್ಲಿ ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನವನದ ಪರಿಸರ ಸೂಕ್ಷ್ಮ ವಲಯದ ಪ್ರಸ್ತಾವನೆಯನ್ನು ವಿಸ್ತೃತವಾಗಿ ಚರ್ಚಿಸಲಾಯಿತು. ಸದರಿ ಪ್ರಸ್ತಾವನೆಯು ಒಟ್ಟು 77 ಗ್ರಾಮಗಳನ್ನು ಒಳಗೊಂಡಿದ್ದು, ಅದರಲ್ಲಿ 16 ಗ್ರಾಮಗಳ ಪರಿಸರ ಸೂಕ್ಷ್ಮ ವಲಯದ ಗಡಿಯನ್ನು 100 ಮೀಟರ್ ಗೆ ಮತ್ತು ಉಳಿದ 61 ಗ್ರಾಮಗಳಿಗೆ ಒಂದು ಕಿ.ಮೀ. ಪರಿಸರ ಸೂಕ್ಷ್ಮ ವಲಯದ ವೈಮಾನಿಕ ಗಡಿ ಎಂದು ಗುರುತಿಸಿ, ಒಟ್ಟು ಪರಿಸರ ಸೂಕ್ಷ್ಮ ವಲಯವನ್ನು 168.84 ಚ.ಕಿ.ಮೀ. ಎಂದು ಶಿಫಾರಸ್ಸು ಮಾಡಿ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿತ್ತು ಅದರಂತೆ ಕೇಂದ್ರ ಸರ್ಕಾರವು ಕರಡು ಅಧಿಸೂಚನೆಯನ್ನು ಹೊರಡಿಸಿದೆ. ಅಲ್ಲದೇ ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನವನದ ಸುತ್ತಲಿನ ಒಂದು (1) ಕಿ.ಮೀ ಪ್ರದೇಶವನ್ನು "ಸೇಫ್ ಝೋನ್" ಎಂದು ಕರ್ನಾಟಕ ಸರ್ಕಾರವು ಅಧಿಸೂಚನೆ ಸಂಖ್ಯೆ: ಸಿಎಲ್/150/ಎಂಕೆಎಲ್/90 ದಿನಾಂಕ: 09/10-01-1991 ರಲ್ಲಿ ಅಧಿಸೂಚನೆಗೊಳಿಸಿ ಸಸ್ಯ ಮತ್ತು ವನ್ಯಜೀವಿಗಳನ್ನು ಸಂರಕ್ಷಿಸಲು ಕ್ರಮಕೈಗೊಳ್ಳಲಾಗಿದೆ. |

ಸಂಖ್ಯೆ: ಎಫ್‌ಇಇ 113 ಎಫ್‌ಜಿಎಲ್ 2018

(ಆರ್. ಶಂಕರ್)
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು